ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 23–12–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ಕೃಷಿ ಆಯೋಗದಿಂದ 2014–15 ನೇ ಸಾಲಿನ ವರದಿ ಹಾಗೂ ಶಿಫಾರಸ್ಸು ಮುಖ್ಯಮಂತ್ರಿಗಳಿಗೆ ಸಲ್ಲಿಕೆ: | **26-12-2015** ಶನಿವಾರ ಬೆಳಿಗ್ಗೆ 11–30 ಗಂಟೆಗೆ | ಗೃಹ ಕಚೇರಿ ಕೃಷ್ಣಾ, ಕುಮಾರಕೃಪಾ ರಸ್ತೆ, ಹೋಟೇಲ್ ಅಶೋಕ್ ಹತ್ತಿರ ಬೆಂಗಳೂರು. |
| 1. | ಬೆಳ್ಳಿ ಸಿನಿಮಾ – ಬೆಳ್ಳಿ ಮಾತು ಕಾರ್ಯಕ್ರಮದಲ್ಲಿ 'ರಂಗಿ ತರಂಗ ' :<br><br><u>ಬೆಳ್ಳಿ ಮಾತು:</u><br><br>ಸುಧಾಕರ್ ಭಂಡಾರಿ,<br>ಚಿತ್ರದ ಕಾರ್ಯಕಾರಿ ನಿರ್ಮಾಪಕ<br><br><u>ಮುಖ್ಯ ಅತಿಥಿಗಳು:</u><br><br>ನಿರೂಪ್ ಭಂಡಾರಿ,<br>ಚಿತ್ರದ ನಾಯಕ ನಟ<br><br>ರಾಧಿಕಾ ಚೇತನ್,<br>ಚಿತ್ರದ ನಟಿ<br><br>ಹೆಚ್. ಕೆ. ಪ್ರಕಾಶ್,<br>ಚಿತ್ರದ ನಿರ್ಮಾಪಕ | **26-12-2015** ಶನಿವಾರ ಸಂಜೆ 4–00 ಗಂಟೆಗೆ | ಚಾಮುಂಡೇಶ್ವರಿ ಸ್ಟುಡಿಯೋ, ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು |

ನಿರ್ದೇಶಕರ ಪರವಾಗಿ

# PRESS RELEASE

## EDUCATION MUST AIM AT BUILDING CHARACTER AND NOT JUST INJECT INFORMATION

**:President, Pranab Mukherjee**

**Bangalore, December 23 (Karnataka Information)**

"Education is not a process of just injecting Information into the minds of the Student's but its main aim is to build their character", Hon'ble President of India, Pranab Mukherjee said.

He was speaking to a huge gathering of students, parents and faculty after inaugurating the closing ceremony of the 150th Anniversary of Bishop Cotton Boys School today in Bengaluru. He also cited the former President of India and great philosopher, Sarvepalli Radhakrishnan, saying "Education must enlighten the spirit and mind of the recipient, which will in turn reiterate that spirit in his/her entire life".

He said that education should instill the capacity of the students to have faith and confidence in the course of civilization. He opined, it should imbibe in the students love for the mother land, rationality of mind, develop scientific temper, cast off superstition, nurture and culture the spirit of co-existence and acceptance in the young mind.

He lauded the effort of the institution for carrying out the long journey of 150 years successfully and shaping lives of many great souls like nuclear scientists Dr. Raja Ramanna and others. He congratulated them for being one of the top three schools of the Country.

Chief Minister, Siddaramaiah, in his speech said every school in the State and country, should impart quality education to their students. No child should be denied education citing the economic backwardness of the family.

He said that every language we learn was an asset and that, language should be a carrier of thought and should not become a barrier. "However, the language of the land should be respected and it should get priority in early learning, as that can only make the life of the child comfortable", he asserted.

Governor, Vaju Bahi Ruda Bhai Wala praised the exemplary work done by the missionaries in the field of Education in India and congratulated the school authorities for completing 150 years of service.

Home Minister, Dr. G Parameshwar, Minister for Bangalore Development, K J George, most Reverend Dr G. Dyvasirvadam, Moderator, Church of South India, Right Reverend Dr P. K. Samuel, Bishop, Karnataka Central Diocese, Prof John K Zachariah, Principal, Bishop Cotton Boys' School and others were present at the occasion.

Pallavi

## ಪತ್ರಿಕಾ ಪ್ರಕಟಣೆ

## ಬೆಳ್ಳಿ ಸಿನಿಮಾದಲ್ಲಿ 'ರಂಗಿ ತರಂಗ'

**ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ)**

**ಕರ್ನಾಟಕ ಚಲನಚಿತ್ರ ಅಕಾಡೆಮಿ ವತಿಯಿಂದ ಪ್ರತಿ ಶನಿವಾರ ಹಮ್ಮಿಕೊಳ್ಳುವ ಬೆಳ್ಳಿ ಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮದಲ್ಲಿ ಡಿಸೆಂಬರ್ 26 ರ ಶನಿವಾರದಂದು ಸಂಜೆ 4-00 ಗಂಟೆಗೆ ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ 'ರಂಗಿ ತರಂಗ' ಚಿತ್ರ ಪ್ರದರ್ಶನಗೊಳ್ಳಲಿದೆ.**

**ಈ ವಾರದ ಬೆಳ್ಳಿ ಮಾತನ್ನು 'ರಂಗಿ ತರಂಗ ' ಚಿತ್ರದ ಕಾರ್ಯಕಾರಿ ನಿರ್ಮಾಪಕ ಸುಧಾಕರ್ ಭಂಡಾರಿ ಅವರು ನಡೆಸಿಕೊಡಲಿದ್ದಾರೆ. ಚಿತ್ರದ ನಾಯಕ ನಟ ನಿರೂಪ್ ಭಂಡಾರಿ, ನಾಯಕ ನಟಿ ರಾಧಿಕಾ ಚೇತನ್, ಚಿತ್ರದ ನಿರ್ಮಾಪಕ ಹೆಚ್. ಕೆ. ಪ್ರಕಾಶ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.**

**ಪಲ್ಲವಿ:ಜಿಪಿಆರ್.**

## ಕಬ್ಬನ್ ಉದ್ಯಾನದಲ್ಲಿ ಭಾನುವಾರದ ಕಾರ್ಯಕ್ರಮ

**ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ **ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆದೇಶ ಮತ್ತು ಸಲಹೆಯಂತೆ** ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:27-12-2015ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಮಹೇಶ್.ಪಿ. ಚಾಮರಾಜನಗರ ಇವರಿಂದ ಜನಪದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀಮತಿ ಶಿಲ್ಪ ನಡುವಿನಮನಿ ಧಾರವಾಡ ಇವರಿಂದ ಬಸವಣ್ಣನವರ ವಚನಗಳು ಮತ್ತು ಭಾವಗೀತೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**9. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ವತಿಯಿಂದ " ಸುಧಾನ್ವ ಎಸ್. ಭಾರದ್ವಾಜ್, ಪ್ರಾರ್ಥನಾ ಶಾಲೆ ಬೆಂಗಳೂರು ಮತ್ತು ತಂಡದವರಿಂದ ದಾಸವಾಣಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.00 ಗಂಟೆಯಿಂದ 08.30 ರವರೆಗೆ ಇಸ್ಕಾನ್ ಟೆಂಪಲ್ ಬೆಂಗಳೂರು ರವರಿಂದ ನಾಮಾಮೃತ ಎಂಬ ಭಜನೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 08.30 ಗಂಟೆಯಿಂದ 09.30 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ "ದೀಪ ಆಕಾಡೆಮಿ ಫಾರ್ ಬ್ಲಾಡ್ಸ್", ಬೆಂಗಳೂರುರವರಿಂದ ಸಮೂಹ ಗಾಯನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ಶ್ರೀ ಗೊರೂರು ರಾಮಸ್ವಾಮಿ ಆಯ್ಯಂಗಾರ್ ರವರ ಸಾಹಿತ್ಯದ ಬಗ್ಗೆ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ.**
- **ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**
- Morning 7.00 Am to 11.00 am NBAIR - Celebration of "Jaikisan - Jai Vidhyan week" : Awareness about Agriculture Insects and their Biological Control of Insects and Technologies developed by NBAIR , Bangaluru for the Management of Insects.

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 10.00 ಗಂಟೆಯವರೆಗೆ ಡಾ// ರಾಜ್ ಕುಮಾರ್ (ಅಪ್ಪಾಜಿ ) ಹೆಲ್ತ್ ಕೇರ್ ಅಸೋಸಿಯೇಷನ್ (ರಿ) ರವರ ವತಿಯಿಂದ ಪ್ರಥಮ ಚಿಕಿತ್ಸೆ ಮತ್ತು ರಕ್ತದಾನದ ಬಗ್ಗೆ ಜನಜಾಗೃತಿ ಕಾರ್ಯಕ್ರಮ ಏರ್ಪಡಿಸಲಾಗಿದೆ.
- ಬೆಳಿಗ್ಗೆ 7.00 ಗಂಟೆಯಿಂದ 12.00 ಗಂಟೆಯವರೆಗೆ ಶ್ರೀಮತಿ ಜಯಶ್ರೀ ರವರ ವತಿಯಿಂದ "ಮಿನಿಯೇಚರ್ ಗಾರ್ಡನ್" ಬಗ್ಗೆ ವಸ್ತು ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ರೇಷ್ಮೆ ಇಲಾಖೆಯ ವತಿಯಿಂದ ರೇಷ್ಮೆಗೂಡಿನಿಂದ ಮಾಡಿದ ವಿವಿಧ ವಿನ್ಯಾಸದ ಹಾರಗಳು, ಅಲಂಕಾರಿಕ ಮತ್ತು ಇತರೆ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ಗಿರಿಜನ ಉಪಯೋಜನೆಯಡಿ ಫೆಲೋಶಿಫ್‌ಗೆ ಅರ್ಜಿ ಆಹ್ವಾನ

ಬೆಂಗಳೂರು, ಡಿಸೆಂಬರ್ 23 (ಕರ್ನಾಟಕ ವಾರ್ತೆ)

ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿಯು 2015-16 ನೇ ಸಾಲಿನಲ್ಲಿ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗಾಗಿ, ಬಯಲಾಟ (ಮೂಡಲಪಾಯ ಯಕ್ಷಗಾನ, ದೊಡ್ಡಾಟ, ಕೇಳಿಕೆ, ಘಟ್ಟದಕೋರೆ ಯಕ್ಷಗಾನ ಇತ್ಯಾದಿ) ಸಣ್ಣಾಟ (ಸಂಗ್ಯಾ-ಬಾಳ್ಯ, ರಾಧಾನಾಟ, ಕಡ್ಲೀಮಟ್ಟ ಸ್ಟೇಷನ್ ಮಾಸ್ಟರ್ ಇತ್ಯಾದಿ) ಸೂತ್ರದಗೊಂಬೆಯಾಟ, ತೊಗಲುಗೊಂಬೆಯಾಟ, ಯಕ್ಷಗಾನ (ತೆಂಕುತಿಟ್ಟು, ಬಡಗುತಿಟ್ಟು, ತಾಳಮದ್ದಳೆ), ಶ್ರೀಕೃಷ್ಣಪಾರಿಜಾತ, ಕುರಿತ ಕಲಾಪ್ರಕಾರಗಳ ಬಗ್ಗೆ 10 ತಿಂಗಳ ಅಧ್ಯಯನ ಮಾಡಿ ಪ್ರಬಂಧ ಮಂಡಿಸುವವರಿಗೆ ಫೆಲೋಶಿಫ್ ನೀಡುವ ಯೋಜನೆಯೊಂದನ್ನು ಹಮ್ಮಿಕೊಂಡಿದೆ.

ಈ ಸಂಶೋಧನಾ ಕಾರ್ಯಕ್ಕಾಗಿ ಒಬ್ಬ ಸಂಶೋಧನಾ ಅಭ್ಯರ್ಥಿಗೆ ರೂ 1.00 ಲಕ್ಷಗಳನ್ನು ನಿಗದಿಪಡಿಸಿಲಾಗಿದ್ದು ಕನ್ನಡ ಎಂ.ಎ. (ಜಾನಪದ, ಸಮಾಜ ವಿಜ್ಞಾನ, ಮಹಿಳಾ ಅಧ್ಯಯನ, ಸಾಹಿತ್ಯ, ಚರಿತ್ರೆ, ಮಾನವಶಾಸ್ತ್ರ ಇತ್ಯಾದಿ) ವ್ಯಾಸಂಗ ಮಾಡಿರುವ ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ. ಆಯ್ಕೆಮಾಡಿಕೊಳ್ಳುವ ಅಧ್ಯಯನದ ವಿಷಯದ ಬಗ್ಗೆ ನಾಲ್ಕು ಪುಟಗಳ ಸಾರಾಂಶ ಹಾಗೂ ತಮ್ಮ ಸಾಧನೆಯ ಕಿರುಪರಿಚಯ ಹಾಗೂ ಜಾತಿ ಪ್ರಮಾಣ ಪತ್ರದೊಂದಿಗೆ ಅರ್ಜಿಯನ್ನು ದಿನಾಂಕ: 15-1-2016 ರೊಳಗೆ ರಿಜಿಸ್ಟ್ರಾರ್, ಕರ್ನಾಟಕ ಯಕ್ಷಗಾನ ಬಯಲಾಟ ಅಕಾಡೆಮಿ, 2ನೇ ಮಹಡಿ, ಚಾಲುಕ್ಯ ವಿಭಾಗ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು - 2 ಅಥವಾ ಇಮೇಲ್ ವಿಳಾಸಕ್ಕೆ ಕಳುಹಿಸಿಕೊಡಬೇಕು.

ಹೆಚ್ಚಿನ ವಿವರಗಳಿಗೆ ಅಕಾಡೆಮಿ ಕಚೇರಿಯ ದೂರವಾಣಿ 080 – 22113146 ಅನ್ನು ಸಂಪರ್ಕಿಸಬಹುದಾಗಿದೆ.

ಪೂರ್ಣಿಮ:ಜಿಪಿಆರ್.